ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 11-12-2020

# ಗೋ ಪೋಷಿಸುವ ರೈತರ ರಕ್ಷಣೆಗೆ ನಿಲ್ಲುವವರ್ಯಾರು?

## ಗೋಹತ್ಯೆ ನಿಷೇಧ ಕಾಯ್ದೆಯ ರೈತ ದೃಷ್ಟಿಕೋನದ ಪರಾಮರ್ಶೆ । ಕುಮಾರಸ್ವಾಮಿ ಹಲವು ಪ್ರಶ್ನೆ

**ಬೆಂಗಳೂರು:** ಗೋಹತ್ಯೆ ನಿಷೇಧ ಕಾಯ್ದೆ ವಿಷಯದಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ಅನ್ನು ತರಾಟೆಗೆ ತೆಗೆದುಕೊಂಡಿರುವ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ, ರೈತನಿಗೆ ಎದುರಾಗುವ ಸಮಸ್ಯೆ-ಸವಾಲುಗಳು ಮತ್ತು ಕಾಯ್ದೆ ಸಾಧಕ-ಬಾಧಕಗಳನ್ನು ಜಿಜ್ಞಾಸೆಗೆ ಒಳಪಡಿಸಿದ್ದಾರೆ.



**ಕುಮಾರಸ್ವಾಮಿ ಎತ್ತಿರುವ ಪ್ರಶ್ನೆಗಳು:**

- ಗೋಹತ್ಯೆ ನಿಷೇಧ ಕಾಯ್ದೆಯಲ್ಲಿ ಕಾಂಗ್ರೆಸ್-ಬಿಜೆಪಿಗೆ ಮತಬ್ಯಾಂಕ್‌ನದ್ದೇ ಆದ್ಯತೆ. ಹಾಲು ಉತ್ಪಾದನೆಯಲ್ಲಿ ತೊಡಗಿರುವ 24 ಲಕ್ಷ ರೈತ ಕುಟುಂಬಗಳಿಗೆ ಕಾಯ್ದೆ ವಿಚಾರವಾಗಿ ಇರುವ ಅನುಮಾನ, ಆತಂಕಗಳನ್ನು ಜೆಡಿಎಸ್ ನಿಷ್ಪಕ್ಷಪಾತವಾಗಿ ವಿಮರ್ಶಿಸಲು ಬಯಸುತ್ತದೆ.
- ಗೋಹತ್ಯೆ ನಿಷೇಧದ ಜತೆಗೆ ಗೋಮಾತೆಯನ್ನು ರಕ್ಷಿಸುವ, ಗೋಮಾತೆಯನ್ನೇ ನಂಬಿದ ರೈತರನ್ನು ರಕ್ಷಿಸುವ ಕಾನೂನಾಗಿಯೂ ಇವತ್ತಿನ ಈ ಕಾಯ್ದೆ ವರ್ತಿಸಬೇಕು ಎಂಬುದು ರೈತರ ಪ್ರತಿನಿಧಿಯಾದ ಜೆಡಿಎಸ್ ಒತ್ತಾಯ.
- ನಾವೆಲ್ಲರೂ ಹಸುಗಳನ್ನು ಪೂಜಿಸುತ್ತೇವೆ. ರೈತ ಮಾತ್ರ ಅದನ್ನು ಪೋಷಿಸುವ ಹೊಣೆ ಹೊತ್ತಿದ್ದಾನೆ. ಗೋವಿನ ಪೋಷಣೆ ಎಂಬುದೇ ಆರ್ಥಿಕ ಹೊರೆಗೆ ಕಾರಣವಾದರೆ, ಆತನ ನೆರವಿಗೆ ನಿಲ್ಲುವವರು ಯಾರು?
- ಹಸುವಿಗೆ ವಯಸ್ಸಾದಾಗ, ಕಾಯಿಲೆ ಬಿದ್ದಾಗ ಅದರ ನಿರ್ವಹಣೆ ಕಷ್ಟ. ಈಗಾಗಲೇ ಸಂಕಷ್ಟದಲ್ಲಿರುವ ರೈತನಿಗೆ ಈ ಹೊರೆ ಜೀವನ್ಮರಣದ ಪ್ರಶ್ನೆಯಾಗಲೂಬಹುದು.
- ಜಾನುವಾರುಗಳನ್ನು ಸೂಕ್ತ ಪ್ರಾಧಿಕಾರದ ಪರವಾನಗಿ ಪಡೆದು ವಧೆ ಮಾಡಬಹುದು. ಇದಕ್ಕೆ ಪಶು ವೈದ್ಯಾಧಿಕಾರಿಯ ಪ್ರಮಾಣ ಪತ್ರ ಬೇಕು ಎಂದು ಹೇಳಲಾಗಿದೆ. ಚಿಕಿತ್ಸೆಗೇ ಈಗ ಪಶುವೈದ್ಯರ ಲಭ್ಯತೆ ಇಲ್ಲ. ಇನ್ನು ಪ್ರಮಾಣ ಪತ್ರಕ್ಕೆ ಲಭ್ಯರಾಗುವರೇ? ಈ ಪ್ರಕ್ರಿಯೆ ದಂಧೆಯ ರೂಪ ತಾಳಿ, ರೈತರ ಶೋಷಣೆ ನಡೆಯುವುದಿಲ್ಲವೇ?
- ಜಾನುವಾರುಗಳನ್ನು ಸಾಗಿಸಲು ಪಶುಸಂಗೋಪನಾ ಇಲಾಖೆಯ ಅನುಮತಿ ಪಡೆಯಬೇಕು ಎಂದು ಹೇಳಲಾಗಿದೆ. ಇದು ಮುಂದೊಂದು ದಿನ ಲೈಸನ್ಸ್ ರಾಜ್ ಪದ್ಧತಿಗೆ ಕಾರಣವಾಗದೇ?
- ಜಾನುವಾರು ವಧೆ ಪ್ರಕರಣದಲ್ಲಿ ಮಾರಾಟ ಮಾಡಿದ ರೈತನನ್ನೂ ಹೊಣೆಗಾರನನ್ನಾಗಿಸುವ ನಿಯಮವಿದೆ. ರೈತ ತಾನು ಮಾರಾಟ ಮಾಡಿದ ಜಾನುವಾರು ವಧಾಸ್ಥಳಕ್ಕೆ ಹೋಗುತ್ತದೆ ಎಂಬುದನ್ನು ಅಂದಾಜಿಸಲು ಹೇಗೆ ಸಾಧ್ಯ?



> ಬೆಳಗ್ಗೆ ರೈತರ ಪ್ರತಿಭಟನೆಗೆ ಬೆಂಬಲಿಸೋದು, ಮಧ್ಯಾಹ್ನದ ಹೊತ್ತಿಗೆ ರೈತ ವಿರೋಧಿ ಕಾಯ್ದೆಗಳ ಪರವಾಗಿ ಮತ ಹಾಕೋದು. ಇದೆಂಥ ರಾಜಕೀಯ ಕುಮಾರಸ್ವಾಮಿ ಅವರೇ? ನಾವು ಮಣ್ಣಿನ ಮಕ್ಕಳು, ರೈತರ ಮಕ್ಕಳು ಅನ್ನೋರೇ ಈ ರೀತಿ ರೈತರ ಬೆನ್ನಿಗೆ ಚೂರಿ ಹಾಕೋದಾ?
>
> । ಸಿದ್ದರಾಮಯ್ಯ ವಿಪಕ್ಷ ನಾಯಕ

## ರೈತ ಸಂಘ, ಕೈ ಮುಖಂಡರಿಗೆ ತಿರುಗೇಟು

**ಬೆಂಗಳೂರು:** ರೈತರ 25 ಸಾವಿರ ಕೋಟಿ ಮೊತ್ತದ ಸಾಲಮನ್ನಾ ಮಾಡುವಾಗ ರೈತ ಸಂಘಗಳ ಬಳಿ ಏನಾದರೂ ಕಮಿಷನ್ ಪಡೆದೆನೇ? ಕೆಲ ರೈತ ನಾಯಕರ ಬಾಯಲ್ಲಿ ಬರುತ್ತಿರುವ 'ಕಿಕ್‌ಬ್ಯಾಕ್' ಏನಾದರೂ ಪಡೆದೆನೇ? ರೈತರು ಸಾಲದ ಸುಳಿಯಲ್ಲಿದ್ದಾಗ ಈ ರೈತ ನಾಯಕರು ಎಲ್ಲಿದ್ದರು? ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹರಿಹಾಯ್ದಿದ್ದಾರೆ. ಸಾಲಮನ್ನಾ ನನ್ನ ಕಾರ್ಯಕ್ರಮ. ಇಷ್ಟಾದರೂ 8 ಕೋಟಿ ಕಿಕ್‌ಬ್ಯಾಕ್ ಪಡೆದ ಆರೋಪ ಮಾಡಿರುವ ಆ ನಾಯಕರಿಗೆ ದೇವರು ಒಳ್ಳೆಯದು ಮಾಡಲಿ ಎಂದು ವ್ಯಂಗ್ಯವಾಡಿದ್ದಾರೆ. ಕಾಂಗ್ರೆಸ್‌ಗೆ ಬಿಜೆಪಿ ವಿರುದ್ಧ ಹೋರಾಡಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಜೆಡಿಎಸ್ ವಿರುದ್ಧ ತನ್ನ ಹೋರಾಟಗಳನ್ನು ರೂಪಿಸುತ್ತಿದೆ. ರೈತ ನಾಯಕರು ಎನಿಸಿಕೊಂಡ ಕೆಲವರ ಹಿಂದೆ ಕಾಂಗ್ರೆಸ್ ಅಡಗಿ ಕುಳಿತಿದೆ. ಅವರ ಮೂಲಕ ರಾಜಕೀಯದ ಹೇಳಿಕೆಗಳನ್ನು ಕೊಡಿಸುತ್ತಿದೆ. ಈ ಮೂಲಕ ಕಾಂಗ್ರೆಸ್ ರೈತ ಸಂಘಗಳನ್ನೂ ಒಡೆಯುವ ಕೆಲಸಕ್ಕೆ ಕೈ ಹಾಕಿದೆ ಎಂದು ಟೀಕಿಸಿದ್ದಾರೆ.